**ಕರ್ನಾಟಕ ಸರ್ಕಾರ**

ಸಂಖ್ಯೆ: AGRI-ACT/104/2020

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ 26.06.2020

## "ಮಾರ್ಪಾಡು ಆದೇಶ"

ಸರ್ಕಾರದ ಆದೇಶದ ಸಂ:AGRI.-ACT/104/2020, ದಿನಾಂಕ: 28.05.2020(P1)ರ ಆದೇಶದೊಂದಿಗೆ ಲಗತ್ತಿಸಲಾಗಿದ್ದ ಮಾರ್ಗಸೂಚಿಯಲ್ಲಿ ಕೆಲವು ಬದಲಾವಣೆಗಳನ್ನು ಮಾಡಿ ಇದರೊಂದಿಗೆ ಲಗತ್ತಿಸಲಾಗಿರುವ ಮಾರ್ಗಸೂಚಿಯ ಪ್ರಕಾರ ಅನುಷ್ಠಾನಗೊಳಿಸಲು ಆದೇಶಿಸಿದೆ. ಇನ್ನುಳಿದಂತೆ ಸದರಿ ಆದೇಶದಲ್ಲಿ ಯಾವುದೇ ಬದಲಾವಣೆಗಳು ಇರುವುದಿಲ್ಲ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 192 ವೆಚ್ಚ-4/2020, ದಿನಾಂಕ:11/06/2020ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ

ಅರ್ಚನ ಎಂ.ಎಸ್. 26/6/2020
(ಅರ್ಚನ ಎಂ.ಎಸ್)
ಸರ್ಕಾರದ ಉಪ ಕಾರ್ಯದರ್ಶಿ-2
ಕೃಷಿ ಇಲಾಖೆ

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-1.
2. ಪ್ರಧಾನ ಮಹಾಲೇಖಪಾಲರು (ಇ&ಆರ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ,ಬೆಂಗಳೂರು-1
3. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಬೆಂಗಳೂರು
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಹಕಾರ ಇಲಾಖೆ, ಬಹುಮಹಡಿಗಳ ಕಟ್ಟಡ
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬಹುಮಹಡಿಗಳ ಕಟ್ಟಡ
8. ಆಯುಕ್ತರು / ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು

..2

9. ನಿರ್ದೇಶಕರು, ತೋಟಗಾರಿಕೆ ಇಲಾಖೆ, ಲಾಲ್‌ಬಾಗ್, ಬೆಂಗಳೂರು
10. ಸರ್ಕಾರದ ಉಪ ಕಾರ್ಯದರ್ಶಿಗಳು (ವೆಚ್ಚ), ಆರ್ಥಿಕ ಇಲಾಖೆ, ಬೆಂಗಳೂರು
11. ನಿರ್ದೇಶಕರು, ಟಿ.ಎನ್.ಎಂ.ಸಿ. ಖನಿಜ ಭವನ, ಬೆಂಗಳೂರು.
12. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು
13. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು
14. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು
15. ಶಾಖಾ ರಕ್ಷ ಕಡತ / ಹೆಚ್ಚುವರಿ ಪ್ರತಿಗಳು.

<u>ಪ್ರತಿ ಮಾಹಿತಿಗಾಗಿ -</u>

1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
2. ಮಾನ್ಯ ಮುಖ್ಯಮಂತ್ರಿಯವರ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ವಿಧಾನಸೌಧ
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು ರವರ ಆಪ್ತ ಕಾರ್ಯದರ್ಶಿ, ವಿಧಾನಸೌಧ
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ ಇವರ ಆಪ್ತ ಶಾಖೆ
5. ಸರ್ಕಾರದ ಉಪ ಕಾರ್ಯದರ್ಶಿಗಳು-1 & 2, ಕೃಷಿ ಇಲಾಖೆ ಇವರ ಆಪ್ತ ಶಾಖೆ
6. ಸರ್ಕಾರದ ಉಪ ಕಾರ್ಯದರ್ಶಿ-1, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
7. ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಇಲಾಖೆ, ಬೆಂಗಳೂರು
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ವೆಚ್ಚ), ವಿಧಾನಸೌಧ, ಬೆಂಗಳೂರು.

ಸರ್ಕಾರದ ಮಾರ್ಪಾಡು ಆದೇಶ ಸಂಖ್ಯೆ: AGRI-ACT/104/2020 ದಿನಾಂಕ:26.06.2020

**ಕೋವಿಡ್ –19 ಅವಧಿಯಲ್ಲಿ ರಾಜ್ಯದ ಮುಸುಕಿನ ಜೋಳ ಬೆಳೆಗಾರರಿಗೆ ಆರ್ಥಿಕ ನೆರವು ನೀಡುವ ಕುರಿತು ಪರಿಷ್ಕೃತ ಮಾರ್ಗಸೂಚಿ**

2019–20ನೇ ಸಾಲಿನಲ್ಲಿ ಕೋವಿಡ್–19ನ ಲಾಕ್‌ಡೌನ್ ನಿಂದಾಗಿ ರಾಜ್ಯದಲ್ಲಿ ಪ್ರಮುಖವಾಗಿ ಮುಸುಕಿನ ಜೋಳ ಬೇಡಿಕೆ ಇಲ್ಲದ ಕಾರಣ ರೈತರು ಸಂಕಷ್ಟಗೊಳಗಾಗಿರುತ್ತಾರೆ. ಆದುದರಿಂದ ಮುಸುಕಿನ ಜೋಳ ಬೆಳೆಗಾರರಿಗೆ ಆರ್ಥಿಕ ನೆರವು ನೀಡುವುದು ಅವಶ್ಯಕವಾಗಿರುತ್ತದೆ. ಮುಸುಕಿನ ಜೋಳ ಬೆಳೆಗೆ ಆರ್ಥಿಕ ನೆರವನ್ನು ಅರ್ಹ ಪಲಾನುಭವಿಗಳಿಗೆ ಪಾರದರ್ಶಕವಾಗಿ ವಿತರಿಸಲು ಈ ಕೆಳಕಂಡ ಮಾರ್ಗಸೂಚಿಗಳನ್ನು ನೀಡಲಾಗಿದೆ. ಸದರಿ ಮಾರ್ಗಸೂಚಿಯಂತೆ ಫಲಾನುಭವಿಗಳನ್ನು ಆಯ್ಕೆ ಮಾಡಿ ಸೂಕ್ತ ಆರ್ಥಿಕ ನೆರವು ನೀಡಲು ಈ ಕೆಳಕಂಡಂತೆ ಕ್ರಮ ಕೈಗೊಳ್ಳಬಹುದಾಗಿರುತ್ತದೆ.

1. ರೈತರಿಗೆ ಅಲ್ಪಾವಧಿ ಆರ್ಥಿಕ ನೆರವು ನೀಡಲು ಕರ್ನಾಟಕ ಸರ್ಕಾರದ ಇ–ಆಡಳಿತ ವತಿಯಿಂದ ಕೈಗೊಳ್ಳಲಾದ 2019–20ನೇ ಸಾಲಿನಲ್ಲಿ ಮುಸುಕಿನ ಜೋಳ ಬೆಳೆದ ರೈತರಿಗೆ ಬೆಳೆ ಸಮೀಕ್ಷೆ ತಂತ್ರಾಂಶದಲ್ಲಿ ಈಗ ದಾಖಲಾಗಿರುವ ಬೆಳೆ ವಿವರಗಳ ಆಧಾರದ ಮೇರೆಗೆ ಪಾವತಿಸುವುದು.
2. ಬೆಳೆ ಸಮೀಕ್ಷೆಯಲ್ಲಿ ಇರುವಂತೆ ಮುಸುಕಿನ ಜೋಳ ಬೆಳೆಗಾರರ ಪಟ್ಟಿಯನ್ನು ಗ್ರಾಮ ಪಂಚಾಯತಿ, ರೈತ ಸಂಪರ್ಕ ಕೇಂದ್ರ ಹಾಗೂ ತಾಲ್ಲೂಕು ಕಛೇರಿಯ ನಾಮಫಲಕದಲ್ಲಿ ಪ್ರದರ್ಶಿಸುವುದು.
3. ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರ್ ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕೃಷಿ ನಿರ್ದೇಶಕರು ಹಾಗೂ ಹಿರಿಯ ಸಹಾಯಕ ತೋಟಗಾರಿಕಾ ನಿರ್ದೇಶಕರು ರವರನ್ನು ಒಳಗೊಂಡಂತೆ ಸಮಿತಿ ಮತ್ತು ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿ, ಜಂಟಿ ಕೃಷಿ ನಿರ್ದೇಶಕರು, ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳು ಮತ್ತು ಉಪ ಕೃಷಿ ನಿರ್ದೇಶಕರು ರವರನ್ನು ಒಳಗೊಂಡಂತೆ ಸಮಿತಿ ರಚಿಸತಕ್ಕದ್ದು. ಈ ಸಮಿತಿಗಳು ಕೆಳಗೆ ವಿವರಿಸಿರುವ ಕರ್ತವ್ಯಗಳನ್ವಯ ಕ್ರಮ ವಹಿಸುವುದು.
4. ಆರ್ಥಿಕ ನೆರವನ್ನು **DBT Portal** ಮುಖಾಂತರ ರೈತರ ಖಾತೆಗೆ ಕೃಷಿ ಆಯುಕ್ತಾಲಯದಿಂದ ನೇರವಾಗಿ ಜಮಾ ಮಾಡುವುದು.
5. ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರ್‌ರವರ ಅಧ್ಯಕ್ಷತೆಯಲ್ಲಿ ರಚಿಸುವ ಸಮಿತಿಯಲ್ಲಿ ಮುಸುಕಿನ ಜೋಳಕ್ಕೆ ಸಂಬಂಧಿಸಿದಂತೆ ನೇರ ನಗದು ವರ್ಗಾವಣೆ ಕುರಿತಾದ ಯಾವುದೇ ದೂರುಗಳು ಬಂದಲ್ಲಿ, ವಿಲೇವಾರಿಗೆ ಸೂಕ್ತ ಕ್ರಮ ಕೈಗೊಳ್ಳುವುದು.
6. 2019–20 ನೇ ಸಾಲಿನಲ್ಲಿ ಬೆಳೆ ಸಮೀಕ್ಷೆಯನ್ವಯ ಮುಸುಕಿನ ಜೋಳ ಬೆಳೆದ ಪ್ರತಿ ರೈತರಿಗೆ ಮಾತ್ರ ರೂ.5,000/– ಗಳ (ರೂಪಾಯಿ ಐದು ಸಾವಿರಗಳು ಮಾತ್ರ) ಆರ್ಥಿಕ ನೆರವು ನೀಡುವುದು.

(signature)

**ಉಸ್ತುವಾರಿ ಸಮಿತಿ:**

ಸದರಿ ಯೋಜನೆಯ ಸಮರ್ಪಕ ಅನುಷ್ಠಾನಕ್ಕಾಗಿ ಈ ಕೆಳಕಂಡ ಉಸ್ತುವಾರಿ ಸಮಿತಿಗಳನ್ನು ರಾಜ್ಯ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ರಚಿಸಿಕೊಳ್ಳುವುದು.

1. **ರಾಜ್ಯ ಮಟ್ಟದ ಸಮಿತಿ:**

- ಆಯುಕ್ತರು, ಕೃಷಿ ಇಲಾಖೆ –ಅಧ್ಯಕ್ಷರು
- ಕೃಷಿ ನಿರ್ದೇಶಕರು, ಕೃಷಿ ಇಲಾಖೆ –ಸದಸ್ಯರು
- ಅಪರ ಕೃಷಿ ನಿರ್ದೇಶಕರು
  (ಬೆಳೆ ಅಭಿವೃದ್ಧಿ & ಯೋಜನೆ) –ಸದಸ್ಯ ಕಾರ್ಯದರ್ಶಿ
- ಜಂಟಿ ನಿರ್ದೇಶಕರು (ಹೆಚ್.ಇ.ಜಿ–ಪಿಎಂಯು) –ಸದಸ್ಯರು

**ಜಿಲ್ಲಾ ಮಟ್ಟದ ಸಮಿತಿ.**

- ಜಿಲ್ಲಾಧಿಕಾರಿಗಳು –ಅಧ್ಯಕ್ಷರು
- ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಗಳು –ಸದಸ್ಯರು
- ಸಂಬಂಧಪಟ್ಟ ತಹಸೀಲ್ದಾರರು –ಸದಸ್ಯರು
- ಜಂಟಿ ಕೃಷಿ ನಿರ್ದೇಶಕರು –ಸದಸ್ಯರು
- ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳು –ಸದಸ್ಯರು
- ಉಪ ಕೃಷಿ ನಿರ್ದೇಶಕರು –ಸದಸ್ಯ ಕಾರ್ಯದರ್ಶಿ

3. **ತಾಲ್ಲೂಕು ಮಟ್ಟದ ಸಮಿತಿ**

- ತಹಸಿಲ್ದಾರ್ –ಅಧ್ಯಕ್ಷರು
- ಸಹಾಯಕ ಕೃಷಿ ನಿರ್ದೇಶಕರು –ಸದಸ್ಯ ಕಾರ್ಯದರ್ಶಿ
- ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು –ಸದಸ್ಯರು

ಬಿ.ಎಸ್. ... (signature)

4. **ಹೋಬಳಿ ಮಟ್ಟದ ತಂಡ**

- ಕೃಷಿ ಅಧಿಕಾರಿ
- ಸಹಾಯಕ ಕೃಷಿ ಅಧಿಕಾರಿ
- ಗ್ರಾಮ ಲೆಕ್ಕಿಗರು

**ರಾಜ್ಯ ಮಟ್ಟದ ಸಮಿತಿಯ ಕರ್ತವ್ಯಗಳು:**

- ಅನುಷ್ಠಾನ ಪೂರ್ವದಲ್ಲಿ ನಿಗಧಿಪಡಿಸಿದ ಯೋಜನೆಯ ರೂಪರೇಷೆಗಳನ್ನು ಅನುಮೋದಿಸುವುದು.
- ಅನುಮೋದನೆಗೊಂಡ ಯೋಜನೆಯ ಬಗ್ಗೆ ವ್ಯಾಪಕವಾಗಿ ರಾಜ್ಯ ಮಟ್ಟದಲ್ಲಿ ಪ್ರಚಾರ ಕೈಗೊಳ್ಳುವಂತೆ ಸೂಚಿಸುವುದು.
- ಕಾಲಕಾಲಕ್ಕೆ ಜಿಲ್ಲಾ ಮಟ್ಟದ ಸಮಿತಿಯೊಂದಿಗೆ ಪ್ರಗತಿ ಪರಿಶೀಲನೆಯನ್ನು ವಿಡಿಯೋ ಕಾನ್ಫರೆನ್ಸ್ ಮೂಲಕ ಕೈಗೊಳ್ಳುವುದು.
- ತಾಲ್ಲೂಕು ಮಟ್ಟದ ಹಾಗೂ ಜಿಲ್ಲಾ ಮಟ್ಟದ ಸಮಿತಿಯಲ್ಲಿ ಕಂಡುಬಂದ ಸಮಸ್ಯೆಗಳಿಗೆ ಪರಿಹಾರವನ್ನು ನೀಡುವುದು.

**ಜಿಲ್ಲಾ ಮಟ್ಟದ ಸಮಿತಿ ಕರ್ತವ್ಯಗಳು**

- ಜಿಲ್ಲಾ ಮಟ್ಟದಲ್ಲಿ ಯೋಜನೆಯ ಬಗ್ಗೆ ವ್ಯಾಪಕವಾಗಿ ಪ್ರಚಾರ ಕೈಗೊಳ್ಳುವುದು.
- ಯೋಜನೆ ಅನುಷ್ಠಾನದಲ್ಲಿ ಹೋಬಳಿ ಹಾಗೂ ತಾಲ್ಲೂಕು ಮಟ್ಟದಲ್ಲಿ ನಿಗಧಿತ ಸಮಯದೊಳಗೆ ಹಾಗೂ ಸಮರ್ಪಕವಾಗಿ ಕಾರ್ಯನಿರ್ವಹಿಸಲು ನಿರ್ದೇಶನ ನೀಡುವುದು.
- ತಾಲ್ಲೂಕು ಮಟ್ಟದ ಸಮಿತಿಯೊಂದಿಗೆ ಕಾಲಕಾಲಕ್ಕೆ ಪ್ರಗತಿ ಪರಿಶೀಲನಾ ಸಭೆ ನಡೆಸಿ ನಿಗಧಿತ ಅವಧಿಯಲ್ಲಿ ಯೋಜನೆಯಡಿ ಆರ್ಥಿಕ/ಭೌತಿಕ ಗುರಿಯನ್ನು ಸಾಧಿಸುವ ನಿಟ್ಟಿನಲ್ಲಿ ಕ್ರಮ ವಹಿಸುವುದು.

**ತಾಲ್ಲೂಕು ಮಟ್ಟದ ಸಮಿತಿಯ ಕರ್ತವ್ಯಗಳು**

- ಯೋಜನೆಯ ಬಗ್ಗೆ ವ್ಯಾಪಕ ಪ್ರಚಾರ ಕೈಗೊಳ್ಳುವುದು.
- ಮುಸುಕಿನ ಜೋಳಕ್ಕೆ ಸಂಬಂಧಿಸಿದಂತೆ ನೇರ ನಗದು ವರ್ಗಾವಣೆಯಲ್ಲಿ ಯಾವುದೇ ದೂರುಗಳು ಬಂದಲ್ಲಿ ಅವುಗಳ ವಿಲೇವಾರಿಗೆ ಕ್ರಮ ಕೈಗೊಳ್ಳುವುದು.
- ಕಾಲಕಾಲಕ್ಕೆ ಸಂಬಂಧಪಟ್ಟ ಇಲಾಖೆಗಳೊಂದಿಗೆ ಪ್ರಗತಿ ಪರಿಶೀಲನೆಯನ್ನು ನಡೆಸಿ ತಾಲ್ಲೂಕುವಾರು ಸಂಪೂರ್ಣ ವರದಿ ನೀಡುವುದು.

**ಹೋಬಳಿ ಮಟ್ಟದ ತಂಡದ ಕರ್ತವ್ಯಗಳು**

- ಯೋಜನೆಯ ಬಗ್ಗೆ ವ್ಯಾಪಕ ಪ್ರಚಾರ ಕೈಗೊಳ್ಳುವುದು.
- ರೈತ ಸಂಪರ್ಕ ಕೇಂದ್ರ ಹಾಗೂ ಗ್ರಾಮ ಪಂಚಾಯಿತಿ ಸೂಚನಾ ಫಲಕದಲ್ಲಿ 2019-20 ನೇ ಸಾಲಿನ ಬೆಳೆ ಸಮೀಕ್ಷೆಯ (crop survey) ರೈತರ ಪಟ್ಟಿಯನ್ನು ಪ್ರಕಟಿಸುವುದು.

**ಫಲಾನುಭವಿಗಳ ಅರ್ಹತೆ:**

1. ಫಲಾನುಭವಿಗಳು ರೈತರಾಗಿದ್ದು (RTC) ಜಮೀನು ಅವರ ಹೆಸರಿನಲ್ಲಿರಬೇಕು ಹಾಗೂ ಆಧಾರ್ ಕಾರ್ಡ್, ರೈತರ ಬ್ಯಾಂಕ್ ಖಾತೆ ಪಾಸ್ ಪುಸ್ತಕ ಹೊಂದಿರಬೇಕು.
2. ಜಂಟಿ ಖಾತೆಯಾಗಿದ್ದಲ್ಲಿ ಇತರೆ ಖಾತೆದಾರರ ಒಪ್ಪಿಗೆ ಪತ್ರ ಪಡೆದಿರಬೇಕು (Notary ರವರಿಂದ ದೃಢೀಕರಣ ಮಾಡಿಸಬೇಕು).
3. ತಂದೆ ಅಥವಾ ತಾಯಿ ಹೆಸರಿನಲ್ಲಿ ಜಮೀನಿದ್ದು, ಅವರು ಮರಣ ಹೊಂದಿದ್ದಲ್ಲಿ ಮಾತ್ರ ಗ್ರಾಮ ಲೆಕ್ಕಿಗರಿಂದ ದೃಢೀಕರಿಸಿ, ಕುಟುಂಬದ ಇತರೆ ಸದಸ್ಯರಿಂದ ಒಪ್ಪಿಗೆ ಪಡೆದು ತಮ್ಮ ಹೆಸರಿನಲ್ಲಿ ಅರ್ಜಿ ಸಲ್ಲಿಸುವುದು.
4. ಮಹಿಳೆಯ ಹೆಸರಿನಲ್ಲಿ ಖಾತೆ ಹೊಂದಿದ್ದು, ಕುಟುಂಬದ ಇತರೆ ಪುರುಷ ಸದಸ್ಯರ ಹೆಸರಿನಲ್ಲಿ ಅರ್ಜಿ ಸಲ್ಲಿಸಿದ್ದಲ್ಲಿ ಯಾವುದೇ ಕಾರಣಕ್ಕೂ ಮಾನ್ಯ ಮಾಡಬಾರದು. ಮಹಿಳೆಯರ ಹೆಸರಿನಲ್ಲಿಯೇ ಅರ್ಜಿ ಸಲ್ಲಿಸುವುದನ್ನು ಉತ್ತೇಜಿಸಬೇಕು.
5. ಮುಸುಕಿನ ಜೋಳ ಬೆಳೆದ ಪ್ರತಿ ರೈತರು ಒಂದು ಹಂಗಾಮಿಗೆ ಅನ್ವಯವಾಗುವಂತೆ ಈ ಸೌಲಭ್ಯಕ್ಕೆ ಅರ್ಹರಾಗಿರುತ್ತಾರೆ.

ಅರ್ಚನ ಎಂ.ಎಸ್ 26/6/2020
(ಅರ್ಚನ ಎಂ.ಎಸ್)
ಸರ್ಕಾರದ ಉಪ ಕಾರ್ಯದರ್ಶಿ-2
ಕೃಷಿ ಇಲಾಖೆ